ನವಿಲುಗರಿ. ಕೃಷ್ಣ ರುಕ್ಮಿಣಿ ಸತ್ಯಭಾಮೆಯ ಪಾರಿಜಾತದ ಕಥೆ, ದುಷ್ಯಂತ ಶಾಕುಂತಲೆಯ ಪ್ರೇಮಕಥೆಯಲ್ಲಿ ಬರುವ ಉಂಗುರದ ಉಲ್ಲೇಖಗಳನ್ನು ಕೇಳಿದಾಗ ಪ್ರೇಮ ನಿವೇದನೆಗೆ, ಸಾಮರಸ್ಯ ತುಂಬಿದ ಪ್ರೇಮ ಜೀವನಕ್ಕೆ ಉಡುಗೊರೆ ಎಂಬುದು ಅದೆಷ್ಟು ಮುಖ್ಯ ಎಂಬುದರ ಅರಿವಾಗುತ್ತದೆ.

ಜಗತ್ತಿನಾದ್ಯಂತ ದೇಶ, ಭಾಷೆ, ಗಡಿ, ಸಂಸ್ಕೃತಿಯ ಭೇದವಿಲ್ಲದೆ ಪಾಲಿಸಲಾಗುವ ಕೆಲವೇ ಆಚರಣೆಗಳಲ್ಲಿ ಉಡುಗೊರೆ ಕೊಟ್ಟು ಪ್ರೀತಿಯನ್ನು ನಿವೇದನೆ ಮಾಡಿಕೊಳ್ಳುವ ಸಂಪ್ರದಾಯವೂ ಒಂದು. ಉದಾಹರಣೆಗೆ, ದಕ್ಷಿಣ ಆಫ್ರಿಕಾದಲ್ಲಿ ನೆಲೆಸಿರುವ ಜುಲು ಬುಡಕಟ್ಟಿನಲ್ಲಿ ಪ್ರೇಮಿಗಳು ಬಣ್ಣಬಣ್ಣದ ಗಾಜಿನ ಮಣಿಗಳಿಂದ ವಿಶೇಷ ಚಿಹ್ನೆಗಳನ್ನು ಹೆಣೆದು ತಮ್ಮ ಪ್ರೇಮಿಗೆ ಉಡುಗೊರೆಯಾಗಿ ಕೊಡುತ್ತಾರೆ. ನ್ಯೂಜಿಲೆಂಡ್, ಹಾಗೆಯೇ ಫಿಜಿ ದೇಶದ ಜನರು ವೇಲ್, ತಿಮಿಂಗಿಲದ ಹಲ್ಲುಗಳನ್ನು ಪ್ರೀತಿಯ ದ್ಯೋತಕವಾಗಿ ಉಡುಗೊರೆಯಾಗಿತ್ತು ತಮ್ಮ ಪ್ರೀತಿಯನ್ನು ಹೇಳಿಕೊಳ್ಳುತ್ತಾರಂತೆ.

ಇದೇ ಹಿನ್ನೆಲೆಯಲ್ಲಿ ಹುಟ್ಟಿದ ಒಂದು ಅಪರೂಪದ ಸಂಪ್ರದಾಯ, ಕಲೆ, ರೂಢಿ ವೇಲ್ಸ್ ದೇಶದಲ್ಲಿ ಕಂಡುಬರುತ್ತದೆ. ಈ ರೂಢಿ ಶುರುವಾದದ್ದು ಹದಿನಾರನೇ ಶತಮಾನದ ಅಂತ್ಯದಲ್ಲಿ. ಬೇಸಾಯ, ಹೈನುಗಾರಿಕೆ, ಗಣಿಗಾರಿಕೆ ಮತ್ತು ನಾವಿಕ ವೃತ್ತಿಯೇ ಮುಖ್ಯವಾಗಿದ್ದ ವೇಲ್ಸ್ ದೇಶದಲ್ಲಿ, ಅಕ್ಟೋಬರ್ ತಿಂಗಳು ಕಳೆಯುವ ಹೊತ್ತಿಗೆ ಒಂದು ರೀತಿಯ ಬೇಸರದ ಛಾಯೆ ಆವರಿಸುತ್ತಿತ್ತು. ಕಾರಣ, ಇಲ್ಲಿ ಚಳಿಗಾಲ ಶುರುವಾಗುತ್ತೆ. ಬೇಗನೆ ಆವರಿಸುವ ಕತ್ತಲು, ಶ್ರಮಜೀವಿಗಳಿಗೆ ಒಂದು ಬಗೆಯ ಏಕತಾನತೆ ಮತ್ತು ಖಿನ್ನತೆಗೆ ನೂಕುತ್ತಿತ್ತು.

ಅದೇ ಸಂದರ್ಭದಲ್ಲಿ, ಅಲ್ಲಿಯ ಕ್ರಿಯಾಶೀಲ ಯುವಕನೊಬ್ಬ, ಪುಟ್ಟ ಮರದ ತುಂಡಿನಲ್ಲಿ ದೊಡ್ಡ ಚಮಚೆ/ಸೌಟೊಂದನ್ನು ತಯಾರಿಸಿದ. ಇದು ಬರಿಯ ಚಮಚೆ ಆಗಿರದೆ ಅತ್ಯಂತ ಸೂಕ್ಷ್ಮ ಕುಸುರಿ ಕೆತ್ತನೆಗಳನ್ನು ಒಳಗೊಂಡ ಸುಂದರ ಕಲಾಕೃತಿಯಾಗಿ ಅವನ ಕೈಯಿಂದ ಹೊರಹೊಮ್ಮಿತು. ತಾನು ತಯಾರಿಸಿದ ಈ ಚಮಚೆಯನ್ನು ತನ್ನ ಪ್ರೇಯಸಿಗೆ ಕಾಣಿಕೆಯ ರೂಪದಲ್ಲಿ ನೀಡಿದ. ತನಗಾಗಿ ಸಮಯ ಕೊಟ್ಟು ಪ್ರಿಯಕರ ತಯಾರಿಸಿದ ಈ ವಸ್ತುವನ್ನು ಕಂಡು ಅವನ ಪ್ರೇಯಸಿ ತುಂಬಾ ಖುಷಿಯಾಗಿ, ತನ್ನೆಲ್ಲ ಗೆಳತಿಯರ ಬಳಗಕ್ಕೂ ಇದನ್ನು ಹೆಮ್ಮೆಯಿಂದ ತೋರಿಸಿಕೊಂಡು ಬಂದಳು.

ಈ ಯುವಕ ಸಮಾಜದ ಇತರ ಯುವಕರಿಗೆ/ಪ್ರೇಮಿಗಳಿಗೆ ಮಾದರಿಯಾದ. ಅವನಂತೆ ಇತರರೂ ತಮ್ಮ ಈ ಚಳಿಗಾಲದ ಏಕತಾನತೆ ಕಳೆಯಲು ಈ **love spoons** ತಯಾರಿಕೆಯಲ್ಲಿ ನಿರತರಾದರು. ಜೊತೆಗೆ ಈ ಕಲಾಕೃತಿಗಳನ್ನು ತಮ್ಮ ಪ್ರೇಯಸಿಯರಿಗೆ ಕೊಡುವ ಹುಮ್ಮಸ್ಸಿನಲ್ಲಿ, ಹಲವು ಅಪರೂಪದ ವಿನ್ಯಾಸಗಳು, ಮಾದರಿಗಳು, ಅಲ್ಲಿನ ಪ್ರಸಿದ್ಧ ಪ್ರೇಮಕಥೆಯ ದ್ಯೋತಕದಂತೆ ಈ ಕೆತ್ತನೆಗಳು ಮೂಡಿಬಂದವು. ಅಲ್ಲಿಂದ ಈ 'ಲವ್ ಸ್ಪೂನ್' ಎಂಬ ಕಾಷ್ಠ ಕಲೆ ವೇಲ್ಸ್ ದೇಶದ ಜನಪದ ವೈಶಿಷ್ಟ್ಯಗಳಲ್ಲಿ ಒಂದಾಗಿ ಗುರುತಿಸಿಕೊಂಡಿತು. ಪ್ರೇಯಸಿಗೆ ಕೊಡಲು ಮಾಡಿದ ಈ ಲವ್ ಸ್ಪೂನ್ ಕೆಲ ಸಮಯದ ನಂತರ ಪ್ರೀತಿ ಮತ್ತು ಸಾಮರಸ್ಯ, ಗೌರವ ಆದರ ಇರುವ ಎಲ್ಲ ಬಾಂಧವ್ಯಗಳಲ್ಲೂ ಪರಸ್ಪರ ಉಡುಗೊರೆಯಾಗಿ ನೀಡುವ ಕ್ರಮ ಶುರುವಾಯಿತು. ಅಷ್ಟೇ ಅಲ್ಲ, ಪ್ರತಿ ಸೌಟಿನಲ್ಲಿ ಇರುವ ಕೆತ್ತನೆಗೆ ಅದರದೇ ಆದ ಅರ್ಥ ಮತ್ತು ಪ್ರಾಮುಖ್ಯತೆ ಇದೆ. ಉದಾಹರಣೆಗೆ;

- ಹೃದಯ– ಪ್ರೀತಿಯ ದ್ಯೋತಕ
- ಎರಡು ಬಟ್ಟಲ ವಿನ್ಯಾಸ– ಸಾಂಗತ್ಯ ಮತ್ತು ನಂಬಿಕೆ
- ಸರಪಳಿ ವಿನ್ಯಾಸ – ಪ್ರಾಮಾಣಿಕತೆ ಮತ್ತು ನಂಬಿಕೆ
- ವಜ್ರಾಕೃತಿ – ಸಮೃದ್ಧಿ ಮತ್ತು ಸುಗಮ ಜೀವನದ ಹಾರೈಕೆ
- ಬೀಗ ಮತ್ತು ಬೀಗದ ಕೈ– ಮನೆಯ ಸ್ವಾಸ್ಥ್ಯ, ಶಾಂತಿ ಮತ್ತು ಸಹಬಾಳ್ವೆ
- ಚಕ್ರ – ಕೆಲಸ ಕಾರ್ಯದಲ್ಲಿ ಶ್ರದ್ಧೆ, ಉನ್ನತಿ

ಒಮ್ಮೆ ಹಡಗಿನಲ್ಲಿ ವ್ಯಾಪಾರಕ್ಕೆಂದು ಹೋದ ಯುವಕ ಸುಮಾರು ಎರಡು ವರ್ಷಗಳ ಕಾಲ ಮನೆಗೆ ಮರಳಲು ಆಗಿರಲಿಲ್ಲವಂತೆ, ಪ್ರತಿ ತಿಂಗಳು ಅವನು ಕಟ್ಟಿಗೆಯಲ್ಲಿ ತಿಂಗಳಿಗೊಂದರಂತೆ 24 ಕೊಂಡಿಗಳ ಸರಪಳಿ ತಯಾರಿಸಿ ತನ್ನ ಪ್ರೀತಿಪಾತ್ರರಿಗೆ ಉಡುಗೊರೆಯಾಗಿ ನೀಡಿದನಂತೆ.

ಹೀಗೆ ಅಸಂಖ್ಯ ಸಾಂಕೇತಿಕ ಅರ್ಥಗಳನ್ನು ಬಿಂಬಿಸುವ ಈ ಕಲಾತ್ಮಕ ಚಮಚೆಗಳ ಜೊತೆಗೆ ವೇಲ್ಸ್ ದೇಶದ ಹಿರಿಮೆ ಬಿಂಬಿಸುವ ರಾಷ್ಟ್ರೀಯ ಚಿಹ್ನೆಗಳನ್ನು ಕೂಡ ಸೇರಿಸಲಾಯಿತು.

ವಸಂತಾಗಮನವನ್ನು ಸಾರುವ ಡಾಫುಡಿಲ್ಸ್ ಹೂವು. ಡ್ರ್ಯಾಗನ್, ಕೆಲ್ಟಿಕ್ ಶೈಲಿಯ ಕೆತ್ತನೆಗಳು ಈ ಕಲೆಯನ್ನು ವೇಲ್ಸ್ ದೇಶದ ಕಲಾಭಿವ್ಯಕ್ತಿಯ ಪ್ರತೀಕವಾಗಿಸಿವೆ. ಸುಮಾರು ಐದು ಶತಮಾನದ ಇತಿಹಾಸ ಇರುವ ಈ ವಿಶಿಷ್ಟ ಕಲೆಯನ್ನು ಇಲ್ಲಿನ ಆಸಕ್ತ ಕಲಾವಿದರು ಅಷ್ಟೇ ಆಸ್ಥೆಯಿಂದ ತಮ್ಮ ಹಿರಿಯರಿಂದ ಕಲಿತು ಮುಂದುವರಿಸಿಕೊಂಡು ಬಂದಿದ್ದಾರೆ. ನಾನು ಒಂದು ಸಂಗೀತ ಸಮ್ಮೇಳನದಲ್ಲಿ ಭಾಗವಹಿಸಲು ವೇಲ್ಸ್ ದೇಶದ ಹಳ್ಳಿಗೆ ಭೇಟಿ ಕೊಟ್ಟಾಗ ಅಲ್ಲಿ ಈ ಕಲೆಯ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳು ಇದ್ದವು. ಅಲ್ಲಿದ್ದ 70ರ ಹರೆಯದ ಲವ್ ಸ್ಪೂನ್ ತಯಾರಿಸುವ ಕಲಾವಿದನೊಬ್ಬ ನನಗೆ ಈ ಕಲೆ ಹುಟ್ಟಿ ಬೆಳೆದು ಬಂದ ಕಥೆಯನ್ನು ಹೇಳಿದ. ಕನ್ನಡದಲ್ಲಿ ಸಾಮಾನ್ಯವಾಗಿ ಬಳಸುವ ಗಾದೆ ಮಾತೊಂದು ಆ ನಿಮಿಷದಲ್ಲಿ ನೆನಪಾಯಿತು.

ಕೆಲಸವಿಲ್ಲದ ಬಡಗಿ... ತನ್ನ ಪ್ರಿಯತಮೆಯ ಮುಖದಲ್ಲೊಂದು ನಗು ನೋಡಲು ದೇಶವೇ ಹೆಮ್ಮೆ ಪಡುವ ಅನನ್ಯ ಕಲೆಯೊಂದನ್ನು ತನಗೇ ಗೊತ್ತಿಲ್ಲದೆ ಶುರುಮಾಡಿದ. ಅದು ಇಂದು ಅದೆಷ್ಟೋ ಜನರಿಗೆ ಕೆಲಸ ಕೊಟ್ಟು, ರಾಷ್ಟ್ರೀಯ ಕಲೆಯಾಗಿ, ಎಷ್ಟೋ ಕಾಷ್ಠ ಕಲಾವಿದರ ಜೀವನಕ್ಕೊಂದು ವಿಶೇಷ ಮೆರುಗನ್ನು ತಂದು ಕೊಟ್ಟಿದೆ.

ಪ್ರತಿಕ್ರಿಯಿಸಿ: feedback@sudha.co.in



